RNU AIR DHARWAD

# JANUARY 18,2025
# ALL INDIA RADIO- DHARWAD
# PRADESH SAMACHARA (KANNADA) 12PM

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

**ಓದಿದವವರು: ವಿವೇಕಾದಿತ್ಯ ಕನಿಯಾಲ**

<><><>

**ದೇಶದ ಆರ್ಥಿಕ ಸದೃಢತೆಗೆ ಸಹಕಾರ ಕ್ಷೇತ್ರದ ಕೊಡುಗೆ ಅಪಾರವಾಗಿದೆ. ಎಂ.ಎಸ್ ಸ್ವಾಮಿನಾಥನ್, ವರ್ಗೀಸ್ ಕುರಿಯನ್ ಅವರಂತಹ ಮಹನೀಯರು ಸಹಕಾರಿ ಕ್ಷೇತ್ರದ ಅಭ್ಯುದಯಕ್ಕೆ ಕೊಡುಗೆ ನೀಡಿ ಮಾದರಿಯಾದರು ಎಂದು ಸಿ.ಟಿ.ಸಿ ಧಾರವಾಡದ ನಿವೃತ್ತ ಪ್ರಾಚಾರ್ಯ ಬಿ.ಎಲ್ ಶಿವಳ್ಳಿ ಹೇಳಿದರು. ಧಾರವಾಡದ ರಾ.ಹ ದೇಶಪಾಂಡೆ ಸಭಾಭವನದಲ್ಲಿ ಜರುಗಿದ ಮರಿಗೌಡ ಫಕ್ಕೀರಗೌಡ ಪಾಟೀಲ ದತ್ತಿ ಉಪನ್ಯಾಸ ಕಾರ್ಯಕ್ರಮದಲ್ಲಿ 'ಸಹಕಾರ ಆಂದೋಲನ' ವಿಷಯವಾಗಿ ಅವರು ವಿಶೇಷ ಉಪನ್ಯಾಸ ನೀಡಿದರು. ದೇಶದಲ್ಲಿ 8 ಲಕ್ಷದ 50 ಸಾವಿರ ಸಹಕಾರಿ ಸಂಘಗಳಿದ್ದು, ಒಟ್ಟು 29 ಕೋಟಿ ಸದಸ್ಯರಿದ್ದಾರೆ ಎಂದರು.**

<><><>

**ಬೈಟ್: ಬಿ.ಎಲ್ ಶಿವಳ್ಳಿ 37 ಸೆಕೆಂದುಗಳು**

<><><>

**ಕರ್ನಾಟಕ ಸಹಕಾರ ಗ್ರಾಹಕರ ಮಹಾಮಂಡಳದ ಅಧ್ಯಕ್ಷ ಜಿ.ಪಿ ಪಾಟೀಲ ಮಾತನಾಡಿ ಸಹಕಾರಿ ಕ್ಷೇತ್ರದಲ್ಲಿ ಎಂ.ಎಫ್ ಪಾಟೀಲರ ಕೊಡುಗೆಗಳನ್ನು ಸ್ಮರಿಸಿದರು.**

<><><>

**ಬೆಳಗಾವಿಯಲ್ಲಿ, 21 ನೇ ತಾರೀಖಿನಂದು ಆಯೋಜಿತವಾಗಿರುವ ಗಾಂಧಿ ಭಾರತ ಕಾರ್ಯಕ್ರಮದಲ್ಲಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ವಿಪಕ್ಷ ನಾಯಕ ರಾಹುಲ್ ಗಾಂಧಿ ಭಾಗವಹಿಸಿ, ಮಹಾತ್ಮಾ ಗಾಂಧೀಜಿಯವರ ಪ್ರತಿಮೆಯನ್ನು ಅನಾವರಣಗೊಳಿಸಲಿದ್ದಾರೆ ಎಂದು ಉಪ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಹೇಳಿದರು. ಹುಬ್ಬಳ್ಳಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಇಂದು ಜೈ ಬಾಪೂ, ಜೈ ಭೀಮ್, ಜೈ ಸಂವಿಧಾನ ಕಾರ್ಯಕ್ರಮದ ಪೂರ್ವಭಾವಿ ಸಭೆ ನಡೆಯಲಿದ್ದು, ಕೇಂದ್ರ ನಾಯಕರು ಭಾಗವಹಿಸಲಿದ್ದಾರೆ ಎಂದರು.**

<><><>

ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯು, ಡಿಸೆಂಬರ್–2024 ರ ಅಂತ್ಯದವರೆಗೆ ನಗದು ರಹಿತ ಪಾವತಿ ವ್ಯವಸ್ಥೆ, ಯುಪಿಐ ವಹಿವಾಟಿನಿಂದ ಒಟ್ಟು 76 ಕೋಟಿ 38 ಲಕ್ಷ ರೂಪಾಯಿ ಸಂಗ್ರಹಿಸಿದೆ ಎಂದು ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕಿ ಎಂ.ಪ್ರಿಯಾಂಗಾ ತಿಳಿಸಿದ್ದಾರೆ. ಪ್ರಯಾಣಿಕರ ಅನುಕೂಲಕ್ಕಾಗಿ ನಗದುರಹಿತ ಪಾವತಿ ಮೂಲಕ ಟಿಕೆಟ್ ವಿತರಣೆಯನ್ನು ಸೆಪ್ಟೆಂಬರ್ 2023 ರಲ್ಲಿ ಆರಂಭಿಸಲಾಗಿದ್ದು, ಪ್ರಸ್ತುತ ಸಂಸ್ಥೆಯ 50 ಘಟಕಗಳಲ್ಲಿ ಜಾರಿಯಲ್ಲಿದೆ ಎಂದರು.

<><><>

ಅಯೋಧ್ಯೆಯಲ್ಲಿ ಶ್ರೀರಾಮ ಲಲ್ಲಾ ವಿಗ್ರಹ ಪ್ರತಿಷ್ಠಾಪನೆ ಬಳಿಕ ಸಮಾಜದಲ್ಲಿ ಶಿಲ್ಪಿಗಳನ್ನು ಗುರುತಿಸಿ ಗೌರವಿಸಲಾಗುತ್ತಿದೆ ಹಾಗೂ ಶಿಲ್ಪಕಲೆಗೆ ದೇಶಾದ್ಯಂತ ಹೆಚ್ಚಿನ ಮನ್ನಣೆ ದೊರೆಯುತ್ತಿದೆ ಎಂದು ಶಿಲ್ಪಿ ಅರುಣ್ ಯೋಗಿರಾಜ್ ಹೇಳಿದರು. ಚಿಕ್ಕಮಗಳೂರು ನಗರದ ಕುವೆಂಪು ಕಲಾ ಮಂದಿರದಲ್ಲಿ, ಕರ್ನಾಟಕ ಶಿಲ್ಪಕಲಾ ಅಕಾಡೆಮಿ ವತಿಯಿಂದ ಜರುಗಿದ 2022, 2023 ನೇ ಸಾಲಿನ ಗೌರವ ಪ್ರಶಸ್ತಿ ಮತ್ತು ಶಿಲ್ಪಶ್ರೀ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು. ಶಿಲ್ಪ ಕಲಾ ಅಕಾಡೆಮಿಯ ಮೂಲಕ ರಾಜ್ಯ ಸರ್ಕಾರವು ಶಿಲ್ಪಕಲೆಗೆ ಉತ್ತೇಜನ ನೀಡಿ, ಶಿಲ್ಪ ಕೆತ್ತನೆ ವೃತ್ತಿಯಲ್ಲಿ ತೊಡಗಿರುವವರವನ್ನು ಗುರುತಿಸಿ, ಪ್ರೋತ್ಸಾಹಿಸುತ್ತಿರುವುದು ಉತ್ತಮ ಬೆಳವಣಿಗೆಯಾಗಿದೆ ಎಂದರು.

<><><>

ಕೊಪ್ಪಳ ಶ್ರೀ ಗವಿಸಿದ್ದೇಶ್ವರ ಜಾತ್ರಾ ಮಹೋತ್ಸವದ ಅಂಗವಾಗಿ, ಗವಿಶ್ರೀ ಕ್ರೀಡಾಕೂಟದ ಭಾಗವಾಗಿ ಜರುಗಿದ ಗಾಳಿಪಟ ಉತ್ಸವದಲ್ಲಿ ದೇಶ, ವಿದೇಶಗಳ ಗಾಳಿಪಟ ತಂಡಗಳು ಭಾಗವಹಿಸಿ ಉತ್ಸವದ ಮೆರುಗನ್ನು ಹೆಚ್ಚಿಸಿವೆ. ವಿವಿಧ ಬಣ್ಣಗಳು ಹಾಗೂ ಗಾತ್ರಗಳ ಗಾಳಪಟಗಳು ಬಾನಿನಲ್ಲಿ ಚಿತ್ತಾರ ಮೂಡಿಸಿದ್ದು, ಗವಿಶ್ರೀ ಕ್ರೀಡಾಕೂಟದ ಹಾಗೂ ಜಾತ್ರಾ ಮಹೋತ್ಸವದ ಮೂರನೇ ದಿನದ ವಿಶೇಷತೆಯಾಗಿತ್ತು ಎಂದು ಕೊಪ್ಪಳ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಶ್ರೀನಿವಾಸ ಗುಪ್ತ ಹೇಳಿದರು.

<><><>

ಮಂಗಳೂರು, ತಣ್ಣೀರುಬಾವಿ ಕಡಲ ಕಿನಾರೆಯಲ್ಲಿ ಕರಾವಳಿ ಉತ್ಸವದ ಭಾಗವಾಗಿ ಗಾಳಿಪಟ ಉತ್ಸವ ಆರಂಭಗೊಂಡಿದ್ದು, ಇಂದು ಮತ್ತು ನಾಳೆ ವಿವಿಧ ದೇಶಗಳ ಗಾಳಿಪಟ ತಂಡಗಳು ಭಾಗವಹಿಸಲಿವೆ ಎಂದು ಜಿಲ್ಲಾಧಿಕಾರಿ ಮುಲ್ಲೈ ಮುಗಿಲನ್ ತಿಳಿಸಿದ್ದಾರೆ.

<><><>

ಕಲ್ಯಾಣ ಕರ್ನಾಟಕ ಭಾಗದಲ್ಲಿ ವಿದ್ಯಾರ್ಥಿಗಳಿಗೆ ಬಸವಣ್ಣ ಹಾಗೂ ಶರಣರ ಬಗ್ಗೆಗಿನ ನಾಟಕಗಳನ್ನು ಪ್ರದರ್ಶಿಸಿ, ಆ ಮೂಲಕ ವಿದ್ಯಾರ್ಥಿಗಳಲ್ಲಿ ರಂಗಾಸಕ್ತಿಯನ್ನು ಮೂಡಿಸಿ, ಸಾಮಾಜಿಕ ಮೌಲ್ಯಗಳನ್ನು ಬೆಳೆಸಬೇಕು ಎಂದು ಕಲಬುರಗಿಯ ಹಿರಿಯ ರಂಗ ಸಂಘಟಕ ಡಾಕ್ಟರ್ ಕೆ. ಲಿಂಗಪ್ಪ ಅಭಿಪ್ರಾಯಪಟ್ಟರು. ನಗರದ ಎಸ್.ಎಂ ಪಂಡಿತ್ ರಂಗಮಂದಿರದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ರಂಗಾಯಣ ಮೂಲಕ ಆಯೋಜಿತವಾದ ಮೋಳಿಗೆ ಮಾರಯ್ಯ ನಾಟಕ ಪ್ರದರ್ಶನವನ್ನು ವೀಕ್ಷಿಸಿ ನಂತರ ನಡೆದ ಸಮಾರೋಪ ಸಮಾರಂಭದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 1 ಗಂಟೆ 10 ನಿಮಿಷಕ್ಕೆ..

<><><>